**Bangalore**
**Regional News**
**07.03.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ದಾಖಲೆಯ ೧೬ನೇ ಆಯವ್ಯಯ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ : ನಾಲ್ಕು ಲಕ್ಷ ಕೋಟಿ ರೂಪಾಯಿ ದಾಟಿದ ಬಜೆಟ್ ಗಾತ್ರ

2. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆಶಾ ಕಾರ್ಯಕರ್ತೆಯರ ಮಾಸಿಕ ಗೌರವಧನ ಹೆಚ್ಚಿಸಿದ ಸರ್ಕಾರ

3. ರಾಜಧಾನಿ ಬೆಂಗಳೂರಿಗೆ ಬಜೆಟ್‌ನಲ್ಲಿ ಭರಪೂರ ಕೊಡುಗೆ ; ಜ್ಞಾನಭಾರತಿ ವಿಶ್ವವಿದ್ಯಾಲಯಕ್ಕೆ ಮನ್‌ಮೋಹನ್ ಸಿಂಗ್ ವಿಶ್ವವಿದ್ಯಾಲಯ ಎಂದು ಮರು ನಾಮಕರಣ

4. ಸರ್ಕಾರಿ ಗುತ್ತಿಗೆಯಲ್ಲಿ ಅಲ್ಪ ಸಂಖ್ಯಾತರಿಗೆ ಶೇಕಡ ೪ ರಷ್ಟು ಮೀಸಲಾತಿ ಘೋಷಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

5. ಬೆಂಗಳೂರಿನಲ್ಲಿ ವಿಶ್ವೇಶತೀರ್ಥ ಸ್ಮಾರಕ ಆಸ್ಪತ್ರೆ ಲೋಕಾರ್ಪಣೆಗೊಳಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ

6. ಮೈಸೂರು ಆಕಾಶವಾಣಿಗೆ ಈಗ ೮೦ರ ಸಂಭ್ರಮ : ಜನಪರ ಕಾರ್ಯಕ್ರಮ ನೀಡಲು ಬಾನುಲಿ ಸದಾಸಿದ್ಧ - ಮಹಾ ನಿರ್ದೇಶಕಿ ಡಾ. ಪ್ರಜ್ಞಾ ಪಾಲಿವಾಲ್ ಕೌರ್

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ತಮ್ಮ ದಾಖಲೆಯ ೧೬ನೇಯ ಬಜೆಟ್ ಮಂಡಿಸಿದ್ದಾರೆ. ಈ ಬಾರಿಯ ಬಜೆಟ್‌ನ ಗಾತ್ರ ಬರೋಬ್ಬರಿ ೪ ಲಕ್ಷ ಕೋಟಿ ರೂಪಾಯಿಯಾಗಿದೆ. ಕಳೆದ ವರ್ಷ ೩.೭೧ ಲಕ್ಷ ಕೋಟಿ ರೂಪಾಯಿ ಬಜೆಟ್ ಗಾತ್ರವಿತ್ತು. ಈ ಬಾರಿ ಈ ಅಂಕಿ ೪ ಲಕ್ಷ ಕೋಟಿ ರೂಪಾಯಿ ದಾಟಿದೆ. ಬಜೆಟ್‌ನಲ್ಲಿ ಶಿಕ್ಷಣ ಇಲಾಖೆಗೆ ೪೫ ಸಾವಿರದ ೨೮೬ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ೩೪ ಸಾವಿರದ ೬೫೫ ಕೋಟಿ, ಇಂಧನ ಇಲಾಖೆಗೆ ೨೬ ಸಾವಿರದ ೮೯೬ ಕೋಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್‌ಗೆ ೨೬ ಸಾವಿರದ ೭೩೫ ಕೋಟಿ, ನೀರಾವರಿ ಇಲಾಖೆಗೆ ೨೨ ಸಾವಿರದ ೧೮೧ ಕೋಟಿ, ನಗರಾಭಿವೃದ್ಧಿ & ವಸತಿ ಇಲಾಖೆಗೆ ೨೧ ಸಾವಿರದ ೪೦೫ ಕೋಟಿ ಹಾಗೂ ಒಳಾಡಳಿತ ಮತ್ತು ಸಾರಿಗೆ ಇಲಾಖೆಗೆ ೨೦ ಸಾವಿರದ ೬೨೫ ಕೋಟಿ ಹಣ ಮೀಸಲಿಡಲಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ೧೭ ಸಾವಿರದ ೪೭೩ ಕೋಟಿ ಮೀಸಲಿಟ್ಟಿದ್ದಾರೆ. ಕಂದಾಯ ಇಲಾಖೆಗೆ ೧೭ ಸಾವಿರದ

೨೦೧ ಕೋಟಿ, ಸಮಾಜಕಲ್ಯಾಣ ಇಲಾಖೆಗೆ ೧೬ ಸಾವಿರದ ೯೫೫ ಕೋಟಿ, ಲೋಕೋಪಯೋಗಿ ಇಲಾಖೆಗೆ ೧೧ ಸಾವಿರದ ೮೪೧ ಕೋಟಿ ರೂಪಾಯಿ ಅನುದಾನ ಕೊಡಲಾಗಿದೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಗೆ ೮ ಸಾವಿರದ ೨೭೫ ಕೋಟಿ, ಕೃಷಿ ಮತ್ತು ತೋಟಗಾರಿಕೆ ಇಲಾಖೆಗೆ ೭ ಸಾವಿರದ ೧೪೫ ಕೋಟಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಗೆ ೩ ಸಾವಿರದ ೯೭೭ ಕೋಟಿ ಹಾಗೂ ಇತರೆ ಇಲಾಖೆಗಳಿಗೆ ೧ ಲಕ್ಷ ೪೯ ಸಾವಿರದ ೮೫೭ ಕೋಟಿ ರೂಪಾಯಿ ಅನುದಾನ ಘೋಷಣೆಯಾಗಿದೆ. ಗೃಹಲಕ್ಷ್ಮಿ ಯೋಜನೆಗೆ ೨೮ ಸಾವಿರದ ೬೦೮ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ.

ಧ್ವನಿ : ಸಿದ್ದರಾಮಯ್ಯ (೨೦ ಸೆಕೆಂಡ್‌ಗಳು)

<><><><>

ರಾಜ್ಯದ ಸಣ್ಣ ಮತ್ತು ಅತಿಸಣ್ಣ ಹಿಡುವಳಿದಾರರಿಗೆ ಕೃಷಿಯನ್ನು ಸುಸ್ಥಿರ ಮತ್ತು ಲಾಭದಾಯಕವಾಗಿಸಲು, ಸರ್ಕಾರವು ರೈತ ಸಮೃದ್ಧಿ ಯೋಜನೆಯನ್ನು ಜಾರಿಗೊಳಿಸಿದೆ. ೨೦೨೫-೨೬ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಯಾಂತ್ರೀಕರಣ ಕಾರ್ಯಕ್ರಮದಡಿ ೫೦ ಸಾವಿರ ರೈತರಿಗೆ ಸಹಾಯಧನ ಒದಗಿಸಲು ೪೨೮ ಕೋಟಿ ರೂಪಾಯಿ ಅನುದಾನ ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಧ್ವನಿ : ಸಿದ್ದರಾಮಯ್ಯ (೨೦ ಸೆಕೆಂಡ್‌ಗಳು)

ಮಂಡ್ಯ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಈಗಾಗಲೇ ಅನುಮೋದನೆ ನೀಡಿದ್ದು, ಮೂಲಸೌಕರ್ಯ ಕಲ್ಪಿಸಲು ೨೫ ಕೋಟಿ ರೂಪಾಯಿ ಒದಗಿಸಿ, ಪ್ರಸಕ್ತ ಸಾಲಿನಲ್ಲಿ ತರಗತಿಗಳನ್ನು ಆರಂಭಿಸಲು ನಿರ್ಧರಿಸಲಾಗಿದೆ.

ವಿಜಯಪುರದ ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಕೃಷಿ ಸಂಶೋಧನಾ ಕೇಂದ್ರ, ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನಲ್ಲಿ ಹೊಸ ಕೃಷಿ ಕಾಲೇಜನ್ನು ಸ್ಥಾಪಿಸಲು ತಜ್ಞರಿಂದ ಕಾರ್ಯಸಾಧ್ಯತಾ ವರದಿಯನ್ನು ಪಡೆದುಕೊಳ್ಳಲು ನಿರ್ಧರಿಸಲಾಗಿದೆ.

<><><><>

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ನಲ್ಲಿ ಘೋಷಿಸಿದ್ದಾರೆ. ಚಿತ್ರದುರ್ಗದ ಮೊಳಕಾಲ್ಮೂರಿನಲ್ಲಿ ೨೦೦ ಹಾಸಿಗೆಗಳ ಹಾಗೂ ಕೊಡಗು ಜಿಲ್ಲೆಯ ವಿರಾಜಪೇಟೆಯಲ್ಲಿ ೪೦೦ ಹಾಸಿಗೆಗಳ ಆಸ್ಪತ್ರೆ ನಿರ್ಮಿಸುವುದಾಗಿ ತಿಳಿಸಿದ್ದಾರೆ. ೮೭೩ ಕೋಟಿ ರೂಪಾಯಿ ವೆಚ್ಚದಲ್ಲಿ ಕಲ್ಯಾಣ ಕರ್ನಾಟಕದಲ್ಲಿ ಆರೋಗ್ಯ ಸೌಲಭ್ಯ ಸುಧಾರಣೆಗೆ ವಿಶೇಷ ಕಾರ್ಯಯೋಜನೆ ಘೋಷಣೆ ಮಾಡಲಾಗಿದೆ. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ

ಕಾರ್ಯನಿರ್ವಹಿಸುತ್ತಿರುವ ೩ ಲಕ್ಷಕ್ಕೂ ಅಧಿಕ ಸಿಬ್ಬಂದಿಗೆ ೫ ಲಕ್ಷ ರೂಪಾಯಿ ತನಕ ನಗದು ರಹಿತ ಚಿಕಿತ್ಸೆ ಒದಗಿಸುವುದಾಗಿ ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿದೆ. ತಲಾ ೧೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಮೈಸೂರು ಮತ್ತು ಕಲಬುರಗಿಯ ವೈದ್ಯಕೀಯ ಕಾಲೇಜುಗಳಲ್ಲಿ ನಿಮ್ಹಾನ್ಸ್ ಮಾದರಿಯ ಸಂಸ್ಥೆ ಆರಂಭಕ್ಕೆ ನಿರ್ಧರಿಸಲಾಗಿದೆ. ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಅಧೀನದಲ್ಲಿ ೧೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭ ಮಾಡುವುದಾಗಿ ಘೋಷಿಸಿದ್ದಾರೆ.

<><><>

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಅತಿಥಿ ಶಿಕ್ಷಕರು ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ಬಜೆಟ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಿಹಿ ಸುದ್ದಿ ನೀಡಿದ್ದಾರೆ. ಅತಿಥಿ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ಪ್ರಸ್ತುತ ನೀಡಲಾಗುತ್ತಿರುವ ಮಾಸಿಕ ಗೌರವಧನವನ್ನು ತಲಾ ೨ ಸಾವಿರ ರೂಪಾಯಿ ಹೆಚ್ಚಿಸಲಾಗುವುದು ಎಂದು ತಿಳಿಸಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಬಿಸಿಯೂಟ ತಯಾರಿಸುವ ಸಿಬ್ಬಂದಿಗೆ ನೀಡುತ್ತಿರುವ ಮಾಸಿಕ ಗೌರವಧನವನ್ನು ತಲಾ ೧ ಸಾವಿರ ರೂಪಾಯಿ ಹೆಚ್ಚಿಸಲು ನಿರ್ಧರಿಸಲಾಗಿದೆ. ಶಾಲಾ ಮಕ್ಕಳಿಗೆ ಆರು ದಿನವೂ ಮೊಟ್ಟೆ, ಬಾಳೆಹಣ್ಣು ವಿತರಣೆ ಜೊತೆಗೆ ಹೆಲ್ತ್ ಮಿಕ್ಸ್ ಪುಡಿ ೫ ದಿನಗಳಿಗೆ ವಿಸ್ತರಿಸುವುದಾಗಿ ಘೋಷಿಸಿದ್ದಾರೆ.

<><><>

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಮಾಸಿಕ ಗೌರವ ಧನವನ್ನು ಹೆಚ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರ ಮಾಸಿಕ ಗೌರವಧನ ೧ ಸಾವಿರ ರೂಪಾಯಿ ಹಾಗೂ ಸಹಾಯಕಿಯರ ಮಾಸಿಕ ಗೌರವಧನ ೭೫೦ ರೂಪಾಯಿಗೆ ಹೆಚ್ಚಿಸಲಾಗುವುದು ಎಂದು ಹೇಳಿದ್ದಾರೆ.

ಧ್ವನಿ : ಸಿದ್ದರಾಮಯ್ಯ (೨೩ ಸೆಕೆಂಡ್‌ಗಳು)

<><><>

ಬಜೆಟ್‌ನಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಭರ್ಜರಿ ಕೊಡುಗೆ ನೀಡಿದ್ದಾರೆ. ಅದರಲ್ಲೂ ವಿರೋಧದ ನಡುವೆಯೂ ಸರ್ಕಾರಿ ಗುತ್ತಿಗೆಯಲ್ಲಿ ಮೀಸಲಾತಿ ಘೋಷಿಸಿದ್ದಾರೆ. ಮೌಲಾನಾ ಆಜಾದ್ ಶಾಲೆಗಳ ಉನ್ನತೀಕರಣ, ವಸತಿ ಶಾಲೆಗಳಲ್ಲಿ ವಾಣಿಜ್ಯ ವಿಭಾಗದ ಪ್ರಾರಂಭ, ಮತ್ತು ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಸೇರಿದಂತೆ ಹಲವು ಯೋಜನೆಗಳನ್ನು ಘೋಷಣೆ ಮಾಡಿದ್ದಾರೆ. ಸರ್ಕಾರಿ ಕಾಮಗಾರಿಗಳ ಗುತ್ತಿಗೆಯಲ್ಲಿ ಪರಿಶಿಷ್ಟ ಜಾತಿ-ಪಂಗಡ, ಹಿಂದುಳಿದವರಿಗೆ ನೀಡಿರುವಂತೆ ಮುಸ್ಲಿಮರಿಗೂ ಶೇಕಡ ೪ರಷ್ಟು ಮೀಸಲಾತಿ ಕಲ್ಪಿಸಿದ್ದಾರೆ.

<><><>

ಸಿನಿಮಾ ಕ್ಷೇತ್ರವನ್ನ ಕೈಗಾರಿಕಾ ನೀತಿಯಡಿ ತರಲು ರಾಜ್ಯ ಸರ್ಕಾರ ನಿರ್ಧರಿಸಿದೆ.. ಸಿನಿಮಾ ರಂಗವನ್ನು ಉದ್ಯಮ ಎಂದು ಪರಿಗಣಿಸಿ ಸರ್ಕಾರ ಬಜೆಟ್‌ನಲ್ಲಿ ಘೋಷಣೆ ಮಾಡಿದೆ. ಈ ಬಾರಿಯ ಬಜೆಟ್ ನಲ್ಲಿ ಸಿನಿಮಾ ಪ್ರಿಯರಿಗೆ ಸಿಹಿ ಸುದ್ದಿಯೊಂದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ್ದಾರೆ. ರಾಜ್ಯದ ಸಿನಿಮಾ ಪ್ರೇಮಿಗಳ ಬಹುವರ್ಷದ ಬೇಡಿಕೆ ಆಗಿದ್ದ ಮಲ್ಟಿಪ್ಲೆಕ್ಸ್ ಟಿಕೆಟ್ ದರ ನಿಯಂತ್ರಣ ಮಾಡುವ ಬೇಡಿಕೆಗೆ ಸರ್ಕಾರ ಅಸ್ತು ಎಂದಿದೆ. ಸಿದ್ದರಾಮಯ್ಯ ಇಂದು ಮಂಡಿಸಿದ ಬಜೆಟ್‌ನಲ್ಲಿ ಮಲ್ಟಿಪ್ಲೆಕ್ಸ್ ಟಿಕೆಟ್ ದರಗಳನ್ನು ೨೦೦ ರೂಪಾಯಿಗೆ ನಿಗದಿಪಡಿಸಲಾಗಿದೆ. ಮೈಸೂರಿನಲ್ಲಿ ಫಿಲಂ ಸಿಟಿ ನಿರ್ಮಾಣಕ್ಕೆ ೫೦೦ ಕೋಟಿ ಹಣವನ್ನು ಮೀಸಲಿಟ್ಟಿದ್ದಾರೆ. ಜೊತೆಗೆ ೧೫೦ ಎಕರೆ ಜಾಗವನ್ನು ಸಹ ಕಾಯ್ದಿರಿಸಿರುವುದಾಗಿ ಬಜೆಟ್ ನಲ್ಲಿ ಘೋಷಣೆ ಮಾಡಿದ್ದಾರೆ.

<><><><>

ಈ ಬಾರಿಯ ಬಜೆಟ್ ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರು ಅಭಿವೃದ್ಧಿಗೆ ಪ್ರತಿವರ್ಷ ನೀಡುತ್ತಿದ್ದ ೩ ಸಾವಿರ ಕೋಟಿ ಅನುದಾನವನ್ನು ೭ ಸಾವಿರ ಕೋಟಿಗೆ ಹೆಚ್ಚಳ ಮಾಡಿದ್ದಾರೆ. ೪೦ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಬೆಂಗಳೂರು ಸುರಂಗ ಮಾರ್ಗ  ಕಾರಿಡಾರ್ ನಿರ್ಮಾಣಕ್ಕೆ ಸರ್ಕಾರದಿಂದ ಬಿ.ಬಿ.ಎಂ.ಪಿಗೆ ೧೯ ಸಾವಿರ ಕೋಟಿ ರೂಪಾಯಿ ಗ್ಯಾರಂಟಿ ಒದಗಿಸುವುದಾಗಿ ಬಜೆಟ್ ನಲ್ಲಿ ಘೋಷಿಸಿದ್ದಾರೆ. ನಮ್ಮ ಮೆಟ್ರೋ ಹಂತ-೩ ಯೋಜನೆಯೊಂದಿಗೆ ೪೦.೫೦ ಕಿಲೋಮೀಟರ್ ಉದ್ದದ ಡಬಲ್-ಡೆಕ್ಕರ್ ಮೇಲು ಸೇತುವೆಯನ್ನು ೮ ಸಾವಿರ ೯೧೬ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಬೆಂಗಳೂರಿನ ಮೆಜೆಸ್ಟಿಕ್‌ನಲ್ಲಿ ಸಾರಿಗೆ ಹಬ್ ನಿರ್ಮಾಣ ಮಾಡಲು ನಿರ್ಧರಿಸಲಾಗಿದೆ. “ಬ್ರ್ಯಾಂಡ್ ಬೆಂಗಳೂರು” ಯೋಜನೆಯಡಿ, ೧ ಸಾವಿರದ ೮೦೦ ಕೋಟಿ ರೂಪಾಯಿ ಮೊತ್ತದ ೨೧ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಕಾವೇರಿ ೫ನೇ ಹಂತದ ಯೋಜನೆ ಲೋಕಾರ್ಪಣೆಯಿಂದ ೫೦ ಲಕ್ಷ ಜನರಿಗೆ ನೀರು ಪೂರೈಕೆಯಾಗಿದೆ. ೬ನೇ ಹಂತ ಯೋಜನೆ ಅನುಷ್ಠಾನಗೊಳಿಸಲು ವಿಸ್ತೃತ ಯೋಜನಾ ವರದಿ ತಯಾರಿಕೆ ಬಿಡಬ್ಲ್ಯೂಎಸ್‌ಎಸ್‌ಬಿ ವತಿಯಿಂದ ಬಯೋಗ್ಯಾಸ್-ಆಧಾರಿತ ಆದಾಯ ಮತ್ತು ಕಾರ್ಬನ್ ಕ್ರೆಡಿಟ್‌ಗಳ ಉಪಯೋಗ ಪಡೆಯಲು ಪಿಪಿಪಿ ಮಾದರಿಯಲ್ಲಿ ಯೋಜನೆ ರೂಪಿಸಲಾಗಿದೆ.

<><><><>

ಬೆಂಗಳೂರು ವಿಶ್ವವಿದ್ಯಾಲಯದ ಹೆಸರನ್ನು ಬದಲಾಯಿಸಲಾಗುತ್ತಿದೆ. ಜ್ಞಾನಭಾರತಿ ಕ್ಯಾಂಪಸ್‌ನಲ್ಲಿರುವ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಮನಮೋಹನ್ ಸಿಂಗ್ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡಲಾಗುತ್ತಿದೆ. ಮಾಜಿ ಪ್ರಧಾನಿ, ಆರ್ಥಿಕ ತಜ್ಞ, ದಿವಂಗತ ಡಾ. ಮನ್‌ಮೋಹನ್ ಸಿಂಗ್ ಸ್ಮರಣಾರ್ಥ ಮರುನಾಮಕರಣ ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

<><><><>

ಈ ಬಾರಿಯ ಬಜೆಟ್‌ನಲ್ಲಿ ಪತ್ರಕರ್ತರ ಮಾಶಾಸನ ೧೫ ಸಾವಿರ ರೂಪಾಯಿಗೆ ಹಾಗೂ ಕುಟುಂಬ ಮಾಶಾಸನ ೭ ಸಾವಿರದ ೫೦೦ ರೂಪಾಯಿಗೆ ಹೆಚ್ಚಳ ಮಾಡಲಾಗಿದೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕೆ ಬೆಳಗಾವಿಯ ಹಿರಿಯ ಪತ್ರಕರ್ತ ಮೆಹಬೂಬ್ ಮಕಾನದಾರ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ಮೆಹಬೂಬ್ ಮಕಾನದಾರ (೨೨ ಸೆಕೆಂಡ್‌ಗಳು)

ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಮಹಿಳೆಯರಿಗೆ ಹಲವು ಕೊಡುಗೆಗಳನ್ನು ನೀಡಿದೆ ಎಂದು ರಾಮನಗರದ ಶಿಕ್ಷಕಿ ಡಾ. ಎಂ. ಕಮಲಮ್ಮ ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಡಾ. ಎಂ. ಕಮಲಮ್ಮ (೨೫ ಸೆಕೆಂಡ್‌ಗಳು)

<><><><>

ಬಜೆಟ್ ಕುರಿತ ಇನ್ನಷ್ಟು ಸಮಗ್ರ ಮಾಹಿತಿ ಸಂಜೆ ೭.೪೦ರ ಪ್ರದೇಶ ಸಮಾಚಾರದಲ್ಲಿ ಬಿತ್ತರವಾಗಲಿದೆ. ಬಜೆಟ್ ಕುರಿತ ಸಂವಾದ ರಾತ್ರಿ ೮ ಗಂಟೆಗೆ ಪ್ರಸಾರವಾಗಲಿದ್ದು, ಅತಿಥಿಗಳಾಗಿ ಆರ್ಥಿಕ ತಜ್ಞರಾದ ಶರಣ್ ಪಾಟೀಲ್ ಭಾಗವಹಿಸಲಿದ್ದಾರೆ. ಸಂವಾದವನ್ನು ಹಿರಿಯ ಪತ್ರಕರ್ತರಾದ ನಾರಾಯಣಸ್ವಾಮಿ ಬಿ.ಎಸ್. ನಡೆಸಿಕೊಡಲಿದ್ದಾರೆ.

***********

ವಿಧಾನಮಂಡಲದ ಉಭಯ ಸದನಗಳ ಕಲಾಪಗಳ ಕುರಿತ ಸಂಚಿಕೆ ವಿಧಾನಮಂಡಲದಲ್ಲಿ ಇಂದು ಸಂಜೆ ೭.೪೫ ರಿಂದ ೮ ಗಂಟೆಯವರೆಗೆ ಪ್ರಸಾರವಾಗಲಿದೆ.

<><><><>

ಬೆಂಗಳೂರಿನ ಮಾರತ್‌ಹಳ್ಳಿಯಲ್ಲಿ ಶ್ರೀಕೃಷ್ಣ ಸೇವಾಶ್ರಮ ಟ್ರಸ್ಟ್ ವತಿಯಿಂದ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ವಿಶ್ವೇಶತೀರ್ಥ ಸ್ಮಾರಕ ಆಸ್ಪತ್ರೆಯನ್ನು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಇಂದು ಲೋಕಾರ್ಪಣೆಗೊಳಿಸಿದ್ದಾರೆ. ಈ ವೇಳೆ ಮಾತನಾಡಿದ ಅಮಿತ್ ಶಾ, ಶ್ರೀಕೃಷ್ಣ ಸೇವಾಶ್ರಮ ಟ್ರಸ್ಟ್‌ನ ಸಮಾಜ ಸೇವೆಯನ್ನು ಶ್ಲಾಘಿಸಿದರು. ಈ ಆಸ್ಪತ್ರೆ ೧೫೦ ಹಾಸಿಗೆ ಸಾಮರ್ಥ್ಯವನ್ನು ಹೊಂದಿದ್ದು, ಅತ್ಯಾಧುನಿಕ ಚಿಕಿತ್ಸಾ ವ್ಯವಸ್ಥೆಗಳೊಂದಿಗೆ ಬಡವರು ಮತ್ತು ದುರ್ಬಲವರ್ಗದವರಿಗೆ ಚಿಕಿತ್ಸೆ ನೀಡುವ ಉದ್ದೇಶವನ್ನು ಹೊಂದಿದೆ.

<><><>

ಮೈಸೂರು ಆಕಾಶವಾಣಿ ಕೇಂದ್ರ ಸ್ಥಾಪನೆಗೊಂಡು ೮೦ ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಮೈಸೂರಿನ ಯಾದವಗಿರಿಯಲ್ಲಿರುವ ಆಕಾಶವಾಣಿ ಕಚೇರಿಯ ಆವರಣದಲ್ಲಿಂದು ನುಡಿ ನಾದ ಸಂಗಮ ಎಂಬ ಹೆಸರಿನಡಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನಗರದ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗದಿಂದ ಆಕಾಶವಾಣಿ ಕಚೇರಿಯ ವರೆಗೆ ಸೈಕಲ್ ಜಾಥಾ ಏರ್ಪಡಿಸಲಾಗಿತ್ತು. ನವದೆಹಲಿಯ ಆಕಾಶವಾಣಿ ಸುದ್ದಿ ವಿಭಾಗದ ಮಹಾನಿರ್ದೇಶಕರಾದ ಡಾ. ಪ್ರಜ್ಞಾ ಪಾಲಿವಾಲ್ ಗೌರ್ ಈ  ಜಾಥಾಗೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಆರೋಗ್ಯವಂತ ಸಮಾಜದ ನಿರ್ಮಾಣವನ್ನು ಉತ್ತೇಜಿಸುವ, ಫಿಟ್ ಇಂಡಿಯಾ ಅಭಿಯಾನದೊಂದಿಗೆ ಹೊಂದಾಣಿಕೆಯಾಗುವ ಸೈಕಲ್ ಜಾಥಾದೊಂದಿಗೆ ಮೈಸೂರು ಆಕಾಶವಾಣಿಯ ೮೦ ನೇ ವಾರ್ಷಿಕೋತ್ಸವದ ಆಚರಣೆಗೆ ಚಾಲನೆ ನೀಡಲಾಗಿದೆ. ಆಕಾಶವಾಣಿ ಎಂದಿಗೂ ಜನರ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತದೆ ಎಂದು ತಿಳಿಸಿದರು. ಎಫ್‌ಎಂ ಗಳ ಮೂಲಕ ಮಾತ್ರವಲ್ಲದೇ ಸಾಮಾಜಿಕ ಮಾಧ್ಯಮಗಳ ಮೂಲಕ ಆಕಾಶವಾಣಿಯ ಕಾರ್ಯಕ್ರಮಗಳನ್ನು ಹೆಚ್ಚಿನ ಜನರಿಗೆ ತಲುಪಿಸಲಾಗುತ್ತಿದೆ. ಆ ಮೂಲಕವೂ ಹೆಚ್ಚಿನ ಜನರ ಪಾಲ್ಗೊಳ್ಳುವಿಕೆಯನ್ನು ಖಚಿತಪಡಿಸಲಾಗುತ್ತಿದೆ ಎಂದು ಹೇಳಿದರು.

ಧ್ವನಿ: ಪ್ರಜ್ಞಾ ಪಾಲೀವಾಲ್ ಗೌರ್ (೪೦ ಸೆಕೆಂಡ್‌ಗಳು)

ಈ ನಡುವೆ ಯಾದವಗಿರಿಯಲ್ಲಿರುವ ಆಕಾಶವಾಣಿ ಕಚೇರಿಯ ಆವರಣದಲ್ಲಿ ಮೈಸೂರಿನ ವಿವಿಧ ಕಾಲೇಜು ವಿದ್ಯಾರ್ಥಿಗಳಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವರಾದ ಎಂ.ಕೆ. ಸವಿತಾ ನಗಾರಿ ಬಾರಿಸುವ ಮೂಲಕ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಆಕಾಶವಾಣಿಯಲ್ಲಿ ಪ್ರಸಾರವಾಗುವ ಅನೇಕ ವಿಷಯಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಒಳಗೊಂಡಿರುವ ಅಂಶಗಳಾಗಿರುತ್ತವೆ. ಮುಂದೆಯೂ ಮತ್ತಷ್ಟು ಜನರಿಗೆ ಆಕಾಶವಾಣಿಯ ಕಾರ್ಯಕ್ರಮಗಳು ತಲುಪಲಿ ಎಂದು ಆಶಿಸಿದ್ದಾರೆ. ಸಮಾರಂಭದಲ್ಲಿ ಮೈಸೂರು ಜಿಲ್ಲಾ ಅಪರ ಜಿಲ್ಲಾಧಿಕಾರಿ ಡಾ ಪಿ.ಶಿವರಾಜು, ಮೈಸೂರು ಆಕಾಶವಾಣಿ ಮುಖ್ಯಸ್ಥ ಎಸ್.ಎಸ್ ಉಮೇಶ್, ಸಹಾಯಕ ನಿರ್ದೇಶಕರಾದ ಟಿ.ವಿ.ವಿದ್ಯಾಶಂಕರ್ ಸೇರಿದಂತೆ ಮತ್ತಿತರರು ಭಾಗಿಯಾಗಿದ್ದರು.

<><><>

ವಿದೇಶಿ ಬಂಡಾವಳ ಹೂಡಿಕೆಯಲ್ಲಿ ದೇಶದಲ್ಲಿಯೇ ಕರ್ನಾಟಕ ೩ನೇ ಸ್ಥಾನದಲ್ಲಿದೆ. ರಫ್ತಿನಲ್ಲಿ ದೇಶದಲ್ಲಿ ಕರ್ನಾಟಕ ರಾಜ್ಯ ಮೊದಲ ಸ್ಥಾನದಲ್ಲಿದ್ದು, ಶೇಕಡ ೧೧.೧೭ರಷ್ಟು ಬೆಳವಣಿಗೆ ಸಾಧಿಸಿದೆ. ೪.೪ ಬಿಲಿಯನ್ ಅಮೆರಿಕನ್ ಡಾಲರ್ ವಿದೇಶಿ ಹೂಡಿಕೆ ಆಕರ್ಷಿಸಿದೆ. ೮೮ ಸಾವಿರದ ೮೫೩ ಕೋಟಿ ಮಿಲಿಯನ್ ಅಮೆರಿಕ ಡಾಲರ್ ರಫ್ತು ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್‌ನಲ್ಲಿ ಘೋಷಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>